# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)

## ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ: 07ನೇ ಜೂನ್, 2017
(ಸಮಯ: ಬೆಳಗ್ಗೆ: 11.00 ಗಂಟೆಗೆ)

******

### 01. ಪ್ರಶ್ನೋತ್ತರ

**ಅ)** ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನಾರನೆಯ ಪಟ್ಟಿ

**ಆ)** ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನಾರನೆಯ ಪಟ್ಟಿ

### 02. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 10 ವರ್ಷಕ್ಕೂ ಮೇಲ್ಪಟ್ಟು ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಆಯುಷ್ ವೈದ್ಯರನ್ನು ಖಾಲಿ ಇರುವ ಹುದ್ದೆಗಳಿಗೆ ಸಕ್ರಮಗೊಳಿಸುವ ಕುರಿತು **ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ವಿ.ಎಸ್.ಉಗ್ರಪ್ಪ** ಅವರು ಸರ್ಕಾರದ ಹಾಗೂ ಖಾಸಗಿಯವರಿಂದ ನಡೆಯುತ್ತಿರುವ ಘನತ್ಯಾಜ್ಯ ಸಂಸ್ಕರಣಾ ಘಟಕಗಳು ಹಾಗೂ ಅವುಗಳು ಸಂಸ್ಕರಣೆ ಮಾಡುತ್ತಿರುವ ಘನತ್ಯಾಜ್ಯದ ಪ್ರಮಾಣ ಹಾಗೂ ವಿಲೇವಾರಿಗಾಗಿ ಮೀಸಲಿಟ್ಟಿರುವ ಹಣದ ಕುರಿತು **ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ಪುಟ್ಟಣ್ಣ** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ರಾಜ್ಯದಲ್ಲಿರುವ ಮಹಾನಗರ ಪಾಲಿಕೆಗಳು, ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸೇವೆಯನ್ನು ಖಾಯಂಗೊಳಿಸುವ ಕುರಿತು **ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಹಾಗೂ ನಗರಾಭಿವೃದ್ಧಿ ಹಾಗೂ ಹಜ್ ಸಚಿವರ** ಗಮನ ಸೆಳೆಯುವುದು.

..2

## ೦೩. ನಿಯಮ ೩೩೦ರ ಮೇರೆಗೆ

ಅ) **ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್), ಶ್ರೀ ನಿರಾಣಿ ಹಣಮಂತ್ ರುದ್ರಪ್ಪ, ಶ್ರೀ ಅರುಣ ಶಹಾಪುರ, ಶ್ರೀಮತಿ ತಾರಾಅನೂರಾಧ, ಶ್ರೀ ಅಮರನಾಥ ಪಾಟೀಲ್ ಹಾಗೂ ಶ್ರೀ ಸೋಮಣ್ಣ ಮ. ಬೇವಿನಮರದ** ಅವರುಗಳು ಆಲಮಟ್ಟಿ ಕೃಷ್ಣ ಮೇಲ್ದಂಡೆ ಯೋಜನೆಯಿಂದ ಬಾಧಿತಗೊಂಡ ಸಂತ್ರಸ್ತ ಕುಟುಂಬಗಳಿಗೆ ಏಕರೂಪ ಪರಿಹಾರ ನಿಗದಿಪಡಿಸುವ ಹಾಗೂ ಬಾಧಿತ 22 ಗ್ರಾಮಗಳಿಗೆ ಮೂಲ ಸೌಲಭ್ಯಗಳನ್ನು ಒದಗಿಸಲು ಹಾಗೂ ಪುನರ್ ವಸತಿ ಕೇಂದ್ರಗಳನ್ನು ನಿರ್ಮಿಸುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)**

ಆ) **ಶ್ರೀ ಅರುಣ ಶಹಾಪುರ** ಅವರು ರಾಜ್ಯದ ಅನುದಾನಿತ ಐ.ಟಿ.ಐ. ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಥಾಮಸ್ ವರದಿಯ ಶಿಫಾರಸ್ಸುಗಳ ಜಾರಿಗೆ ಸಂಬಂಧಿಸಿದಂತೆ ಸರ್ಕಾರ ಹೊರಡಿಸಿರುವ ಆದೇಶವನ್ನು ಕೂಡಲೇ ಜಾರಿಗೊಳಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಯವರು)**

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

www.kla.kar.nic.in/council.htm